Akashvani: Bangalore
Pradesha Samachara In Kannada
16.08.2025 :2.30pm

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

16.08.2025 : 2.30pm

*******

ಮುಖ್ಯಾಂಶಗಳು

- ೧. ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಅನುಸೂಚಿತ ಜಾತಿ, ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆ
- ೨. ಕೊಪ್ಪಳದ ಮುನಿರಾಬಾದ್ ಅಣೆಕಟ್ಟಿನ ೭ಗೇಟ್ ಗಳಿಗೆ ಹಾನಿ - ಭದ್ರತಾ ನಿಗಾ ಸಮಿತಿ ವರದಿ - ಸಚಿವ ಬಸವರಾಜ್ ತಂಗಡಗಿ
- ೩. ದೇಶಾದ್ಯಂತ ಕೃಷ್ಣ ಜನ್ಮಾಷ್ಟಮಿ ಸಂಭ್ರಮ - ಉಡುಪಿಯಲ್ಲಿ ಸೆಪ್ಟಂಬರ್ ೧೪ರಂದು ಆಚರಣೆ
- ೪. ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ಚಂದ್ರಶೇಖರನಾಥ ಸ್ವಾಮೀಜಿ ನಿಧನ - ಗಣ್ಯರಿಂದ ಸಂತಾಪ

><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಂದು ವಿಧಾನಸೌಧ ಸಭಾಂಗಣದಲ್ಲಿ ರಾಜ್ಯ ಅನುಸೂಚಿತ ಜಾತಿ, ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಸಭೆ ನಡೆಯಿತು. ಸಚಿವರಾದ ಡಾ.ಹೆಚ್.ಸಿ ಮಹಾದೇವಪ್ಪ, ಪ್ರಿಯಾಂಕ ಖರ್ಗೆ, ಡಾ.ಎಂ.ಸಿ.ಸುಧಾಕರ್, ಸತೀಶ್ ಜಾರಕಿಹೊಳಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

><><><><><

ಕೊಪ್ಪಳ ತಾಲೂಕಿನ ಮುನಿರಾಬಾದ್ ಬಳಿ ಇರುವ ತುಂಗಭದ್ರಾ ಜಲಾಶಯದ ಏಳು ಗೇಟ್‌ಗಳಿಗೆ ಹಾನಿಯಾಗಿರುವ ಕುರಿತು ಅಣೆಕಟ್ಟು ಭದ್ರತಾ ನಿಗಾ ಸಮಿತಿ ವರದಿ ನೀಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ. ಕೊಪ್ಪಳದಲ್ಲಿ ಸುದ್ದಿಗೋಷ್ಠಿಯಲ್ಲಿ

ಮಾತನಾಡಿದ ಅವರು, ತುಂಗಭದ್ರಾ ಜಲಾಶಯದ ೬ ಗೇಟ್‌ಗಳಿಂದ ನೀರು ಬಿಡುವುದಕ್ಕೆ ತೊಂದರೆಯಾಗುತ್ತಿದೆ. ಆದರೆ ಪ್ರಸ್ತುತ ಹಂಗಾಮಿನ ಬೆಳೆಗೆ ನೀರು ಕೊಡಲು ಯಾವುದೇ ತೊಂದರೆ ಇಲ್ಲ. ಈ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ ಎಂದು ಅವರು ಹೇಳಿದರು.

><><><><><

ರಾಜ್ಯದಲ್ಲಿ ಶೇ ೬೦ ರಿಂದ ೭೦ ರ? ಜನರು ಕೃಷಿಯನ್ನು ಅವಲಂಬಿಸಿದ್ದು, ಕೃಷಿ ಚಟುವಟಿಕೆಗೆ ಸರ್ಕಾರ ನಿರಂತರವಾಗಿ ಪ್ರೋತ್ಸಾಹ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಕೃಷಿ ಸಚಿವ ಎನ್ ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಮಾತನಾಡಿದ ಅವರು ರಾಜ್ಯದಲ್ಲಿ ಹೆಚ್ಚು ಜನರು ಕೃಷಿಯನ್ನು ಅವಲಂಭಿಸಿದ್ದು, ರೈತರು ಆರ್ಥಿಕವಾಗಿ ಸದೃಢರಾದರೆ ರಾಜ್ಯ ಅಭಿವೃದ್ಧಿಯಾಗುತ್ತದೆ ಎಂಬ ದೃಷ್ಟಿಯಿಂದ ಕೃಷಿ ಇಲಾಖೆಗೆ ಹೆಚ್ಚಿನ ಯೋಜನೆಗಳನ್ನು ನೀಡುತ್ತಿದ್ದು ರೈತರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ ಪಂಚ ಗ್ಯಾರಂಟಿ ಯೋಜನೆಗಳು, ಹಾಲಿಗೆ ಸಹಾಯಧನ ಸೇರಿದಂತೆ ವಿವಿಧ ರೀತಿಯ ಸಬ್ಸಿಡಿಗಳನ್ನು ನೀಡಲಾಗುತ್ತಿದೆ. ರೈತರು ಬೆಳೆದ ಬೆಳೆಗಳನ್ನು ಸಂಸ್ಕರಣೆ, ಮೌಲ್ಯವರ್ಧನೆ ಮಾಡಿ ಮಾರುಕಟ್ಟೆ ಕಲ್ಪಿಸಿ ಆರ್ಥಿಕವಾಗಿ ಸದೃಢಗೊಳಿಸಲು ಎಫ್.ಪಿ.ಒ ಗಳ ಸಂಖ್ಯೆ ಹೆಚ್ಚಿಸಿ ಬ್ರ್ಯಾಡಿಂಗ್ ಮಾಡಬೇಕಿದೆ. ಇದಕ್ಕೆ ಬೇಕಿರುವ ಅಗತ್ಯ ಸಹಕಾರ ನೀಡಲಾಗುವುದು ಎಂದು ಹೇಳಿದ್ದಾರೆ.

><><><><><

ದೇಶಾದ್ಯಂತ ಇಂದು ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ನಾಡಿನಲ್ಲೆಡೆ ಚಾಂದ್ರಮಾನ ಪದ್ಧತಿಯಂತೆ ಅಷ್ಟಮಿ ಹಬ್ಬವನ್ನು ಆಚರಿಸಿದರೆ, ಉಡುಪಿಯಲ್ಲಿ ಸೌರಮಾನ ಪದ್ಧತಿಯನ್ನು ಅನುಸರಿಸಲಾಗುತ್ತದೆ. ಹುಣ್ಣಿಮೆ- ಅಮಾವಾಸ್ಯೆಯ ಗಣನೆಯಲ್ಲಿ ಇತರ ಭಾಗದಲ್ಲಿ ಆಚರಣೆ ನಡೆದರೆ, ತುಳುನಾಡ ಕರಾವಳಿಯಲ್ಲಿ ಸಂಕ್ರಮಣ ವಿಶೇಷ. ಹಾಗಾಗಿ ಈ ಬಾರಿ ಅಷ್ಟಮಿ ತಿಥಿಯ ಜೊತೆ ರೋಹಿಣಿ ನಕ್ಷತ್ರ ಸನ್ನಿಹಿತವಾಗಿರುವ, ಸೆಪ್ಟೆಂಬರ್ ೧೪ರಂದು ಅಷ್ಟಮಿ ಆಚರಿಸಲಾಗುತ್ತಿದೆ. ಇದನ್ನು ಶ್ರೀಕೃಷ್ಣ ಜಯಂತಿ ಎಂದು ಕರೆಯಲಾಗುತ್ತದೆ. ಹಾಗಾಗಿಯೇ ಕೃಷ್ಣ ಊರಿನಲ್ಲಿ ಇಂದು ಅಷ್ಟಮಿಯ ಸಂಭ್ರಮವಿಲ್ಲ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಶ್ರೀ ಕೃಷ್ಣ ಹಾಗೂ ವೇಣುಗೋಪಾಲ ದೇವಾಲಯಗಳಲ್ಲಿ ವಿಶೇಷ ಅಲಂಕಾರ ಹಾಗೂ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ದೊಡ್ಡಬಳ್ಳಾಪುರ ದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮ ದಲ್ಲಿ ಶಾಸಕ ಧೀರಜ್ ಮುನಿರಾಜು

ಶ್ರೀ ಕೃಷ್ಣನ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಶ್ರೀ ಕೃಷ್ಣನ ಆದರ್ಶ ಗುಣಗಳು, ನಮಗೆ ಮಾದರಿಯಾಗಬೇಕು. ಬದುಕಿನ ಮೌಲ್ಯಗಳನ್ನು ಸಾರುವ ಭಗವದ್ಗೀತೆ ಯನ್ನು ವಿದ್ಯಾರ್ಥಿಗಳಿಗೆ ಪಠ್ಯವಾಗಿರಿಸಬೇಕು ಎಂದರು. ದಾವಣಗೆರೆ ಜಿಲ್ಲಾದ್ಯಂತ ಇಂದು ಶ್ರೀ ಕೃಷ್ಣ ಜನ್ಮಾಷ್ಟಮಿ ಯನ್ನು ಆಚರಿಸಲಾಯಿತು. ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಜಿಲ್ಲಾ ಯಾದವ ಸಮಾಜದಿಂದ ನಗರದ ಪ್ರಮುಖ ರಸ್ತೆಗಳಲ್ಲಿ ಶ್ರೀ ಕೃಷ್ಣನ ಭಾವಚಿತ್ರದ ಮೆರವಣಿಗೆ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಜರುಗಿತು. ಶ್ರೀಕೃಷ್ಣ ರಾಧಾ ವೇಷದಾರಿಗಳ ಸ್ಪರ್ಧೆ ಹಾಗೂ ವಿವಿಧ ಕಾರ್ಯಕ್ರಮಗಳು ಜರುಗಿದವು

><><><><><

ಧರ್ಮಸ್ಥಳದಲ್ಲಿನ ಸಾಮೂಹಿಕ ಸಮಾಧಿ ಪ್ರಕರಣದ ಹಿಂದೆ ಪಿತೂರಿ ಇದೇ ಎಂದು ಆರೋಪಿಸಿ ಬಿಜೆಪಿ ಇಂದು 'ಧರ್ಮಸ್ಥಳ ಚಲೋ' ಅಭಿಯಾನ ಪ್ರಾರಂಭಿಸಿದೆ. ಶಾಸಕ ಎಸ್.ಆರ್. ವಿಶ್ವನಾಥ್ ನೇತೃತ್ವದಲ್ಲಿ ನೆಲಮಂಗಲ ಟೋಲ್‌ನಿಂದ ಧರ್ಮಸ್ಥಳದವರೆಗೆ ಅಭಿಯಾನ ನಡೆತ್ತಿದ್ದಾರೆ.ಬಳಿಕ ಬಿಜೆಪಿ ನಾಯಕರು ಧರ್ಮಸ್ಥಳದಲ್ಲಿ ಮಂಜುನಾಥ ಸ್ವಾಮಿಯ ದರ್ಶನ ಪಡೆಯಲಿದ್ದಾರೆ.

><><><><><

ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಲಾಲ್‌ಬಾಗ್‌ನ ಫಲಪುಷ್ಪ ಪ್ರದರ್ಶನವನ್ನು ದೊಡ್ಡಸಂಖ್ಯೆಯಲ್ಲಿ ಜನ ವೀಕ್ಷಿಸಿದರು. ನಿನ್ನೆ ಒಂದೇ ದಿನ ೧ ಲಕ್ಷ ೭೯ ಸಾವಿರಕ್ಕಿಂತಲೂ ಅಧಿಕ ಮಂದಿ ಭೇಟಿ ನೀಡಿದ್ದು, ಸುಮಾರು ೮೫ ಲಕ್ಷ ರೂಪಾಯಿಗೂ ಅಧಿಕ ಶುಲ್ಕ ಸಂಗ್ರಹವಾಗಿದೆ. ಇದೇ ೧೮ ರವರೆಗೆ ಫಲಪುಷ್ಪ ಪ್ರದರ್ಶನ ಮುಂದುವರಿಯಲಿದೆ.

><><><><><

ಬೆಂಗಳೂರಿನ ಕೆಂಗೇರಿಯಲ್ಲಿರುವ ವಿಶ್ವ ಒಕ್ಕಲಿಗ ಮಹಾ ಸಂಸ್ಥಾನ ಮಠದ ಸಂಸ್ಥಾಪಕ ಪೀಠಾಧ್ಯಕ್ಷರಾದ ಚಂದ್ರಶೇಖರನಾಥ ಸ್ವಾಮೀಜಿ ಇಂದು ನಿಧನರಾಗಿದ್ದಾರೆ. ವಯೋಸಹಜ ಅನಾರೋಗ್ಯದಿಂದ ಅವರು ಬಳಲುತ್ತಿದ್ದರು. ಮೃತರ ಅಂತಿಮ ವಿಧಿವಿಧಾನಗಳು ಇಂದು ಮಧ್ಯಾಹ್ನದ ಬಳಿಕ ನಡೆಯಲಿವೆ. ಸ್ವಾಮೀಜಿ ನಿಧನಕ್ಕೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಸಂತಾಪ ಸೂಚಿಸಿದ್ದು, ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ಮಾರ್ಗದರ್ಶಕರಾಗಿ ಕೆಲಸ ಮಾಡಿದ ಅವರ ಸೇವೆ ಗಣನೀಯ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ತಿಳಿಸಿದ್ದಾರೆ. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಆಧ್ಯಾತ್ಮಿಕ ಲೋಕದಲ್ಲಿ ಮಹೋನ್ನತ

ಸಾಧನೆ ಮಾಡಿದ ಸ್ವಾಮೀಜಿ ಅವರು, ಸಮಾಜ ಸೇವೆ ಮತ್ತು ಧರ್ಮ ಕೈಂಕರ್ಯದಲ್ಲಿ ಸದಾ ಮುಂಚೂಣಿಯಲ್ಲಿ ಇರುತ್ತಿದ್ದರು ಎಂದು ಸ್ಮರಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಚಂದ್ರಶೇಖರ ನಾಥ ಸ್ವಾಮೀಜಿ ಅವರು ಸಮಾಜಕ್ಕೆ ನೀಡಿದ ಕೊಡುಗೆ ಅಪಾರ ಎಂದು ತಮ್ಮ ಸಂತಾಪ ನುಡಿಗಳಲ್ಲಿ ತಿಳಿಸಿದ್ದಾರೆ. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಸ್ವಾಮೀಜಿಗಳ ನಿಧನದ ಸುದ್ದಿ ಆಘಾತ ಮೂಡಿಸಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ತಿಳಿಸಿದ್ದಾರೆ.

><><><><><

ಕಾರವಾರದ ರವೀಂದ್ರನಾಥ ಠಾಗೂರ್ ಕಡಲತೀರದಲ್ಲಿರುವ ಟುಪಲೋವ್ ಯುದ್ಧ ವಿಮಾನ ವಸ್ತು ಸಂಗ್ರಾಲಯವು ಜಿಲ್ಲೆಯ ಪ್ರವಾಸೀ ಆಕರ್ಷಣೆಯ ತಾಣವಾಗಲಿದ್ದು, ಹೆಚ್ಚಿನ ಸಂಖ್ಯೆಯ ಪ್ರವಾಸಿಗರನ್ನು ಸೆಳೆಯಲಿದೆ ಉತ್ತರಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ತಿಳಿಸಿದ್ದಾರೆ. ಅವರು ಜಿಲ್ಲಾಡಳಿತ ಮತ್ತು ಪ್ರವಾಸೋದ್ಯಮ ಇಲಾಖೆ ವತಿಯಿಂದ ರವೀಂದ್ರನಾಥ ಟ್ಯಾಗೋರ್ ಕಡಲತೀರದಲ್ಲಿ ಸ್ಥಾಪಿಸಲಾದ ಹಳೆಯ ಯುದ್ಧ ವಿಮಾನ ಟುಪಲೋವ್‌ನ್ನು ಸಾರ್ವಜನಿಕ ವೀಕ್ಷಣೆಗೆ ಅವಕಾಶ ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಟುಪಲೋವ್ ಯುದ್ಧ ವಿಮಾನವು ದೇಶದ ರಕ್ಷಣಾ ಕ್ಷೇತ್ರದಲ್ಲಿ ತನ್ನದೆ ಆದ ಛಾಪನ್ನು ಮೂಡಿಸಿದ್ದು, ಈ ಯುದ್ದ ವಿಮಾನದ ಕಾರ್ಯಕ್ಷಮತೆ, ಇದು ರಕ್ಷಣಾ ಕ್ಷೇತ್ರಕ್ಕೆ ನೀಡಿದ ಕೊಡುಗೆಯ ಬಗ್ಗೆ ವಿದ್ಯಾರ್ಥಿಗಳು ಸಾರ್ವಜನಿಕರು ತಿಳಿದುಕೊಳ್ಳಲು ಸುವರ್ಣ ಅವಕಾಶವಾಗಿದ್ದು, ಇಂದಿನಿಂದ ಈ ಯುದ್ದ ವಿಮಾನ ವಸ್ತು ಸಂಗ್ರಾಲಯವನ್ನು ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದ್ದು, ಈ ಯುದ್ದ ವಿಮಾನವು ಕಾರವಾರ ನಗರಕ್ಕೆ ಹೊಸ ಕಳೆಯನ್ನು ತಂದಿದ್ದು, ಪ್ರವಾಸಿಗರನ್ನು ತನ್ನತ್ತ ಆಕರ್ಷಿಲಿದೆ. ಈ ಮೂಲಕ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗೆ ಸಹಾಯವಾಗಲಿದೆ ಎಂದರು. ಭೂ ಸೇನೆ, ನೌಕಾಪಡೆ ಮತ್ತು ವಾಯುಪಡೆಗಳಿಗೆ ಸೇರ್ಪಡೆಯಾಗ ಬಯಸುವ ಜಿಲ್ಲೆಯ ಯುವಕರಿಗೆ ಈ ಯುದ್ದ ವಿಮಾನ ವೀಕ್ಷಣೆಯು, ದೇಶಭಕ್ತಿಯ ಭಾವನೆಯನ್ನು ಮತ್ತಷ್ಟು ಉತ್ತೇಜಸಲಿದೆ,

><><><><><

ಸರ್ಕಾರದ ಅನೇಕ ಸೌಲಭ್ಯಗಳಾದ ಸಾಮಾಜಿಕ ಭದ್ರತಾ ಯೋಜನೆಗಳ ಜನರಿಗೆ ಪಡೆಯಲು ಬ್ಯಾಂಕ್ ಖಾತೆ ಅವಶ್ಯಕ ಅದರೊಂದಿಗೆ ಕಾಲಕ್ಕೆ ಸರಿಯಾಗಿ ಕೆವೈಸಿ ನವೀಕರಿಸವುದು ಖಾತೆಗೆ

ನಾಮನಿರ್ದೇಶನ ನೀಡುವುದು ಅತ್ಯವಶ್ಯಕ ಎಂದು ಕೆನರಾ ಬ್ಯಾಂಕ್ ಜನರಲ್ ಮ್ಯಾನೇಜರ್ ಬಿ.ಸುಧಾಕರ ಕೊಟ್ಟಾರಿ ತಿಳಿಸಿದ್ದಾರೆ. ಕಲ್ಲಮುಂಡ್ಕೂರು ಗ್ರಾಮ ಪಂಚಾಯತ್‌ನಲ್ಲಿ ನಡೆದ ಜನ ಸುರಕ್ಷಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸುರಕ್ಷಿತ ಡಿಜಿಟಲ್ ವ್ಯವಹಾರ ಜನ ಸುರಕ್ಷಾ ಯೋಜನೆಗಳಾದ ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ, ಸುಕನ್ಯಾ ಸಮೃದ್ಧಿ ಖಾತೆ,ಜನ್ -ಧನ್ ಖಾತೆ ಹಾಗೂ ಇತರೆ ಬ್ಯಾಂಕಿಂಗ್ ಸೌಲಭ್ಯಗಳ ಕುರಿತು ಆರ್ಥಿಕ ಸಾಕ್ಷರತಾ ಅಮೂಲ್ಯ ಮಂಗಳೂರು ಸಮಾಲೋಚಕ ಲತೇಶ್ ಬಿ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳ ನೋಂದಣಿ, ಮರು ಕೆವೈಸಿ, ಶಿಕ್ಷಣ ಸಾಲ, ಗೃಹ ಸಾಲ ಮಂಜೂರಾತಿ ಪತ್ರ ನೀಡಲಾಯಿತು.

><><><><><><

ಕೋಲಾರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಈಗಿರುವ ೬ ಖರೀದಿ ಕೇಂದ್ರಗಳ ಜೊತೆಗೆ ಖಾಸಗಿ ಧಾನ್ಯ ಸಂಗ್ರಹಣೆ ಗೋದಾಮುಗಳನ್ನು ಬಳಸಿಕೊಂಡು ವರ್ಷದ ಆರು ತಿಂಗಳು ಖರೀದಿ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್ ರವಿ ತಿಳಿಸಿದ್ದಾರೆ.

><><><><><><

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ(ಕೆಎಸ್‌ಸಿಎ) ಆಯೋಜಿಸಿರುವ ಪ್ರತಿಷ್ಠಿತ ಮಹಾರಾಜ ಟ್ರೋಫಿ-೨೦೨೫ರ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಶಿವಮೊಗ್ಗ ಲಯನ್ಸ್ ಗುಲ್ಬರ್ಗ ಮಿಸ್ಟಿಕ್ಸ್ ತಂಡಗಳ ನಡುವೆ ಹಣಾಹಣಿ ನಡೆಯಲಿದೆ. ಮೈಸೂರಿನ ಮಾನಸಗಂಗೋತ್ರಿಯ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ಇಂದು ಮದ್ಯಾಹ್ನ ೩:೧೫ಕ್ಕೆ ಶಿವಮೊಗ್ಗ ಲಯನ್ಸ್ ಗುಲ್ಬರ್ಗ ಮಿಸ್ಟಿಕ್ಸ್ ತಂಡಗಳ ನಡುವೆ ಪಂದ್ಯ ನಡೆಯಲಿದೆ. ಬಳಿಕ ಸಂಜೆ ೭:೧೫ಕ್ಕೆ ಇದೆ ಮೈದಾನದಲ್ಲಿ ಮೈಸೂರು ವಾರಿಯರ್ಸ್ ಹುಬ್ಬಳ್ಳಿ ಟೈಗರ್ಸ್ ತಂಡದ ನಡುವೆ ಎರಡನೇ ಪಂದ್ಯ ನಡೆಯಲಿದೆ.

><><><><><><